ಇ) ಈ ಕೇಂದ್ರಗಳನ್ನು ನಿರ್ಮಿಸಲು ಸ್ವಂತ ನಿವೇಶನ ಹೊಂದಿದ್ದರೂ, ಕಟ್ಟಡಗಳನ್ನು ನಿರ್ಮಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಈ) ಹಾಗಿದ್ದಲ್ಲಿ ಎ ಎನ್ ಎಂ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮವೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಸವದತ್ತಿ ತಾಲ್ಲೂಕಿನಲ್ಲಿ ಒಟ್ಟು 53 ಎ ಎನ್ ಎಂ ಕೇಂದ್ರಗಳಿವೆ

ಆ) 41 ಎ ಎನ್ ಎಂ ಕೇಂದ್ರಗಳು ಸ್ವಂತ ಕಟ್ಟಡ ಹೊಂದಿರುತ್ತವೆ

ಇ) ಬಂದಿದೆ

ಈ) ಅನುದಾನದ ಲಭ್ಯತೆ ಆಧಾರದ ಮೇರೆಗೆ ಹಂತ ಹಂತವಾಗಿ ಉಪಕೇಂದ್ರಗಳ ಕಟ್ಟಡವನ್ನು ನಿರ್ಮಿಸಲಾಗುವುದು ಕೆ ಹೆಚ್ ಎಸ್ ಡಿ ಆರ್ ಪಿ ವತಿಯಿಂದ 2007–08ನೇ ಸಾಲಿನಲ್ಲಿ ಕೆಲವೊಂದು ಉಪಕೇಂದ್ರಗಳ ಕಟ್ಟಡ ಕಟ್ಟಲು ಯೋಜಿಸಲಾಗಿದೆ

1066 (595) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಬೆಳಗಾವ್ ಜಿಲ್ಲೆ ಸವದತ್ತಿ ತಾಲ್ಲೂಕಿನ ಮುನವಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರ ಘಟಕವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ,

ಆ) ಹಾಗಿದ್ದಲ್ಲಿ ಮೇಲ್ದರ್ಜೆಗೇರಿಸುವ ಕಾರ್ಯವು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಹಾಗಿದ್ದಲ್ಲಿ ಸರ್ಕಾರ ಕೈಗೊಳ್ಳಲಿರುವ ಕ್ರಮವೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಪ್ರಸ್ತಾವನೆ ಬಂದಿರುತ್ತದೆ

ಆ) ಪರಿಶೀಲನೆಯಲ್ಲಿದೆ

ಇ) ಸವದತ್ತಿ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆ 273533 ಇದ್ದು ಮಾರ್ಗಸೂಚಿ ಪ್ರಕಾರ ಸವದತ್ತಿ ಹಾಗೂ ಯರಗಟ್ಟಿ 2 ಸಮುದಾಯ

ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಸವದತ್ತಿ ತಾಲ್ಲೂಕು ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ ಹೆಚ್ಚಿನ ಸಮುದಾಯ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶ ಇರುವುದಿಲ್ಲ

1067 (1120) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) 2006ರ ಸೆಪ್ಟೆಂಬರ್ ತಿಂಗಳಲ್ಲಿ ರಾಜೀವಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯವು ನಡೆಸಿದ ಎಂ ಡಿ ಎಸ್ ಪರೀಕ್ಷೆಯಲ್ಲಿ ಶೇಕಡಾ 20ಕ್ಕೂ ಕಡಿಮೆ ಪ್ರಮಾಣದಲ್ಲಿ ವಿದ್ಯಾರ್ಥಿಗಳು ತೇರ್ಗಡೆಯಾಗಿರುವುದು ನಿಜವೆ,

ಆ) ಸದರಿ ಪರೀಕ್ಷೆಯ ಪೆರಿಯೋಡಾಂಟಿಕ್ಸ್ ವಿಭಾಗದ ಮೌಲ್ಯಮಾಪನದಲ್ಲಿನ ತಾಂತ್ರಿಕ ದೋಷಗಳಿಂದ ಹಾಗೂ ಸಂಭವನೀಯ ಅಚಾತುರ್ಯಗಳಿಂದಾಗಿ ಪ್ರತಿಭಾವಂತ ವಿದ್ಯಾರ್ಥಿಗಳು ತೇರ್ಗಡೆ ಹೊಂದದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ವಿಶ್ವವಿದ್ಯಾಲಯದ ಸದರಿ ಪರೀಕ್ಷೆಯ ದಾಖಲೆಯಲ್ಲಿಯೇ ಕನಿಷ್ಟ ಮಟ್ಟದ ಫಲಿತಾಂಶ ಇದಾಗಿರುವುದರಿಂದ ವಿದ್ಯಾರ್ಥಿಗಳಿಗುಂಟಾದ ಅನ್ಯಾಯವನ್ನು ಪರಿಹರಿಸಲು ಕನಿಷ್ಟ ಹೆಚ್ಚುವರಿಯಾಗಿ ಐದು ಕೃಪಾಂಕಗಳನ್ನು ನೀಡಲು ಸರ್ಕಾರ ಕ್ರಮ ಜರುಗಿಸುವುದೇ,

ಈ) ಈ ಪರೀಕ್ಷೆಯ ಐದನೇ ಮೌಲ್ಯಮಾಪನದಲ್ಲಿ ಅಂಕಗಳು ತುಂಬ ಕಡಿಮೆಯಾಗಲು ಕಾರಣಗಳೇನು,

ಉ) ಹಾಗಿದ್ದಲ್ಲಿ, ಮೌಲ್ಯಮಾಪನದಲ್ಲಿನ ಸಂಭವನೀಯ ಲೋಪ ದೋಷಗಳನ್ನು ಸರಿಪಡಿಸಿ ವಿದ್ಯಾರ್ಥಿಗಳಿಗೆ ನ್ಯಾಯವೊದಗಿಸುವಲ್ಲಿ ಸರ್ಕಾರ ಮುಂದಾಗುವುದೇ, ಇಂಥ ಮಹತ್ವದ ಪರೀಕ್ಷೆಗಳ ಮೌಲ್ಯಮಾಪನದ ಸುವ್ಯವಸ್ಥೆಗಾಗಿ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಡಾ॰ ವಿ ಎಸ್ ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು)

ಅ) –ಇಲ್ಲ–

ಆ) –ಇಲ್ಲ–